**ಕರ್ನಾಟಕ ಸರ್ಕಾರ**
**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**
**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

---

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 03–09–2021**

# ಮಾಧ್ಯಮ ಆಹ್ವಾನ

# Media Invitation

**ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನ ಕುರಿತು ಸಮಿತಿಯ ಅಂತಿಮ ಸಭೆ:**

**ಅಧ್ಯಕ್ಷತೆ**
**ಬಸವರಾಜ ಹೊರಟ್ಟಿ,**
**ಮಾನ್ಯ ಸಭಾಪತಿಗಳು, ಕರ್ನಾಟಕ ವಿಧಾನ ಪರಿಷತ್ತು.**

**ದಿನಾಂಕ: 04–09–2021, ಶನಿವಾರ, ಸಮಯ: ಮಧ್ಯಾಹ್ನ 3.00 ಗಂಟೆಗೆ**

**ಸ್ಥಳ: ಕೊಠಡಿ ಸಂಖ್ಯೆ: 106, ಮೊದಲನೇ ಮಹಡಿ, ವಿಧಾನಸೌಧ, ಬೆಂಗಳೂರು.**

# ಪತ್ರಿಕಾ ಪ್ರಕಟಣೆ

**PRESS RELEASE**

## ಪ್ರತಿಯೊಬ್ಬ ಕ್ರೀಡಾಪಟುವೂ ಚಾಂಪಿಯನ್

– ರಾಜ್ಯಪಾಲ ಥಾವರ್‌ಚಂದ್ ಗೆಹ್ಲೂಟ್

ಬೆಂಗಳೂರು, ಸೆಪ್ಟೆಂಬರ್ 03 (ಕರ್ನಾಟಕ ವಾರ್ತೆ):

ಅಂತರಾಷ್ಟ್ರೀಯ ಮಟ್ಟದಲ್ಲಿ ಭಾರತವನ್ನು ಪ್ರತಿನಿಧಿಸುವ ಪ್ರತಿಯೊಬ್ಬ ಕ್ರೀಡಾಪಟುವೂ ಚಾಂಪಿಯನ್ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೂಟ್ ಪ್ರಶಂಸೆ ವ್ಯಕ್ತಪಡಿಸಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ರಾಭವನದಲ್ಲಿ ಆಯೋಜಿಸಲಾಗಿದ್ದ 'ಟೋಕಿಯೋ ಒಲಂಪಿಕ್ಸ್–2020 ರಲ್ಲಿ ಭಾಗವಹಿಸಿದ್ದ ರಾಜ್ಯದ ಕ್ರೀಡಾಪಟುಗಳಿಗೆ ಪ್ರೋತ್ಸಾಹಧನ ವಿತರಣಾ ಸಮಾರಂಭ'ದಲ್ಲಿ ಅವರು ಮಾತನಾಡಿದ ರಾಜ್ಯಪಾಲರು, ಭಾರತದ ಕ್ರೀಡಾಪಟುಗಳು ಟೋಕಿಯೋ ಒಲಂಪಿಕ್ಸ್‌ನಲ್ಲಿ ಉತ್ತಮ ಪ್ರದರ್ಶನ ನೀಡುವ ಮೂಲಕ ಉತ್ತಮ ಸಾಧನೆ ಮಾಡಿದ್ದಾರೆ. ಇದೇ ಮೊದಲ ಬಾರಿಗೆ 125 ಆಟಗಾರರ ಅತಿ ದೊಡ್ಡ ತಂಡವನ್ನು ಒಲಂಪಿಕ್ಸ್‌ಗೆ ಕಳುಹಿಸಲಾಗಿದೆ. ಅತ್ಯುತ್ತಮ ಪ್ರದರ್ಶನ ನೀಡುವ ಮೂಲಕ ಆಟಗಾರರು 7 ಪದಕಗಳನ್ನು ಗೆದ್ದಿದ್ದಾರೆ. ಇನ್ನು ಕೆಲವರು ಕಡಿಮೆ ಅಂತರದಿಂದ ಪದಕಗಳಿಂದ ವಂಚಿತರಾಗಿದ್ದಾರೆ. ಆಟಗಾರರು ಅದ್ಭುತ ಪ್ರದರ್ಶನಗಳನ್ನು ನೀಡುವ ಮೂಲಕ ಅನೇಕ ಹೊಸ ದಾಖಲೆಗಳನ್ನು ಬರೆಯುವ ಮೂಲಕ ದೇಶಕ್ಕೆ ಹೆಮ್ಮೆ ತಂದಿದ್ದಾರೆ. ಭಾರತೀಯ ಆಟಗಾರರ ಈ ಸಾಧನೆ ಶ್ಲಾಘನೀಯ ಮತ್ತು ಯುವ ಆಟಗಾರರಿಗೆ ಸ್ಫೂರ್ತಿದಾಯಕವಾಗಲಿದೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು.

1900ರಲ್ಲಿ ಮೊದಲ ಬಾರಿಗೆ ಭಾರತವು ಒಲಂಪಿಕ್ಸ್‌ನಲ್ಲಿ ಭಾಗವಹಿಸಿತು. ಒಲಂಪಿಕ್ಸ್-2020ರ ಆರಂಭದವರೆವಿಗೂ ಭಾರತವು ಒಟ್ಟು 28 ಪದಕಗಳನ್ನು ಗೆದ್ದಿದೆ. 1928ರಿಂದ 1980ರವರೆವಿಗೂ ಭಾರತೀಯ ರಾಷ್ಟ್ರೀಯ ಹಾಕಿ ತಂಡವು ಪ್ರಾಬಲ್ಯವನ್ನು ಸಾಧಿಸಿತ್ತು. 2012 ರಲ್ಲಿ 83 ಸದಸ್ಯರ ಭಾರತೀಯ ತಂಡವು ಗರಿಷ್ಠ 6 ಪದಕಗಳಳನ್ನು ಗೆದ್ದಿತ್ತು. 2012ರಿಂದೀಚೆಗೆ ಅಂದರೆ ಪದಕಗಳನ್ನು ಗೆಲ್ಲುತ್ತಾ ಬಂದಿದ್ದು, 2021ರಲ್ಲಿ 7 ಪದಕಗಳನ್ನು ಗೆಲ್ಲುವ ಮೂಲಕ ಭಾರತದ ಆಟಗಾರರು ಮತ್ತೊಂದು ದಾಖಲೆಯನ್ನು ಬರೆದಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ನೀರಜ್ ಚೋಪ್ರಾ ಅವರು ಜಾವೆಲಿನ್ ಎಸೆತದಲ್ಲಿ ಚಿನ್ನದ ಪದಕ, ಮೀರಾಬಾಯಿ ಚಾನು ವೇಟ್ ಲಿಫ್ಟಿಂಗ್‌ನ 49 ಕೆಜಿ ವಿಭಾಗದಲ್ಲಿ 202 ಕೆಜಿ ಭಾರ ಎತ್ತುವ ಮೂಲಕ ಬೆಳ್ಳಿ ಪದಕ, ಕುಸ್ತಿಪಟು ರವಿ ದಹಿಯಾ 57 ಕೆಜಿ ತೂಕ ವಿಭಾಗದಲ್ಲಿ ಬೆಳ್ಳಿ ಪದಕ, ಬ್ಯಾಡ್ಮಿಂಟನ್ ಆಟಗಾರ್ತಿ ಪಿ.ವಿ.ಸಿಂಧು ಕಂಚಿನ ಪದಕ, 65 ಕೆಜಿ ತೂಕದ ಫ್ರೀಸ್ಟೈಲ್ ಕುಸ್ತಿಯಲ್ಲಿ ಬಜರಂಗ್ ಪುನಿಯಾ ಕಂಚಿನ ಪದಕ, ಲೋವ್ಲಿನಾ ಬೊರ್ಗೊಹೈನ್ ಬಾಕ್ಸಿಂಗ್‌ನಲ್ಲಿ ಕಂಚಿನ ಪದಕ ಮತ್ತು 41 ವರ್ಷಗಳ ನಂತರ ಪುರುಷರ ಹಾಕಿ ತಂಡವು ಕಂಚಿನ ಪದಕ ಗೆಲ್ಲುವ ಮೂಲಕ ಇತಿಹಾಸವನ್ನು ಬರೆದಿದ್ದಾರೆ. ಭಾರತೀಯ ಮಹಿಳಾ ಹಾಕಿ ತಂಡವು ಪ್ರಸ್ತುತ ಒಲಿಂಪಿಕ್ಸ್‌ನಲ್ಲಿ ಉತ್ತಮ ಪ್ರದರ್ಶನ ನೀಡುವ ಮೂಲಕ ಭರವಸೆಯನ್ನು ಮೂಡಿಸಿದ್ದಾರೆ. ಮಹಿಳಾ ಹಾಕಿ ತಂಡದ ಕೋಚ್ ಅಂಕಿತಾ ಬಿ.ಎಸ್ ರವರ ಮಾರ್ಗದರ್ಶನದಿಂದಾಗಿ ಭಾರತೀಯ ಮಹಿಳಾ ಹಾಕಿ ತಂಡ ಉತ್ತಮ ಪ್ರದರ್ಶನ ನೀಡಲು ಸಾಧ್ಯವಾಯಿತು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಪ್ರಸ್ತುತ ಟೋಕಿಯೋದಲ್ಲಿ ನಡೆಯುತ್ತಿರುವ ಪ್ಯಾರಾಲಿಂಪಿಕ್ ಕ್ರೀಡಾಕೂಟದಲ್ಲಿ ಭಾರತೀಯ ಆಟಗಾರರು ಉತ್ತಮ ಪ್ರದರ್ಶನ ನೀಡುವ ಮೂಲಕ 11 ಪದಕಗಳನ್ನು ತಮ್ಮದಾಗಿಸಿಕೊಂಡಿದ್ದಾರೆ. ಈ ಬಾರಿ ಪ್ಯಾರಾಲಿಂಪಿಕ್ ಕ್ರೀಡಾಕೂಟದಲ್ಲಿ ಭಾರತ ಹೊಸ ಇತಿಹಾಸ ನಿರ್ಮಿಸಲಿದೆ ಎಂದು ಆಶಯ ವ್ಯಕ್ತಪಡಿಸಿದರು.

ಟೋಕಿಯೋ ಒಲಿಂಪಿಕ್ಸ್ 2020ರಲ್ಲಿ ಕರ್ನಾಟಕ ರಾಜ್ಯದಿಂದ ಗಾಲ್ಫ್‌ನಲ್ಲಿ ಅದಿತಿ ಅಶೋಕ್, ಈಜು ಸ್ಪರ್ಧೆಯಲ್ಲಿ ಶ್ರೀಹರಿ ನಟರಾಜನ್ ಮತ್ತು ಹಾರ್ಸ್ ರೈಡಿಂಗ್‌ನಲ್ಲಿ ಫವಾಜ್ ಮಿರ್ಜಾ ತಮ್ಮ ಅತ್ಯತ್ತಮ ಪ್ರದರ್ಶನ ನೀಡುವ ಮೂಲಕ ರಾಜ್ಯ ಮತ್ತು ದೇಶಕ್ಕೆ ಕೀರ್ತಿ ತಂದಿದ್ದಾರೆ.

ಭಾರತದಲ್ಲಿ ಕ್ರೀಡೆಗಳನ್ನು ಉತ್ತೇಜಿಸುವ ಸಲುವಾಗಿ ಭಾರತೀಯ ಕ್ರೀಡಾ ಪ್ರಾಧಿಕಾರವು ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯದ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಗೌರವಾನ್ವಿತ ಶ್ರೀ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಕ್ರೀಡಾ ಚಟುವಟಿಕೆಗಳಿಗಾಗಿ ಪರಿಣಾಮಕಾರಿ ಯೋಜನೆಗಳನ್ನು ಸಿದ್ಧಪಡಿಸಿದೆ ಮತ್ತು ಜಾರಿಗೊಳಿಸಿದೆ. ಆ ಎಲ್ಲ ಯೋಜನೆಗಳ ಫಲದ ಫಲಿತಾಂಶಗಳೇ ಇಂದು ನಮ್ಮ ಮುಂದಿವೆ. ಕರ್ನಾಟಕ ರಾಜ್ಯ ಸರ್ಕಾರವು ವಿವಿಧ ಯೋಜನೆಗಳ ಮೂಲಕ ಕ್ರೀಡಾ ಚಟುವಟಿಕೆಗಳನ್ನು ಉತ್ತೇಜಿಸುತ್ತಿದೆ. ವಿವಿಧ ಕ್ರೀಡೆಗಳಲ್ಲಿ ಸಾಧನೆ ಮಾಡಿದ ಆಟಗಾರರಿಗೆ ಬಹುಮಾನ ನೀಡುವುದರ ಜೊತೆಗೆ ಆಧುನಿಕ ಕ್ರೀಡಾ ಸೌಲಭ್ಯಗಳನ್ನು ಸಹ ಆಟಗಾರರಿಗೆ ಒದಗಿಸಲಾಗುತ್ತಿದೆ ಎಂದು ತಿಳಿಸಿದರು.

ರಾಜ್ಯವು ಅತ್ಯಾಧುನಿಕ ಸಿಂಥೆಟಿಕ್ ಅಥ್ಲೆಟಿಕ್ ಟ್ರ್ಯಾಕ್‌ಗಳನ್ನು, 14 ಜಿಲ್ಲಾ ಕೇಂದ್ರ ಕ್ರೀಡಾಂಗಣಗಳು, 121 ತಾಲ್ಲೂಕು ಕ್ರೀಡಾಂಗಣಗಳು, 29 ಈಜುಕೊಳಗಳು ಮತ್ತು 44 ಒಳಾಂಗಣ ಕ್ರೀಡಾಂಗಣಗಳೊಂದಿಗೆ 14 ಸ್ಥಳಗಳಲ್ಲಿ 4 ಸಿಂಥೆಟಿಕ್ ಹಾಕಿ ಟರ್ಫ್ ಕೋರ್ಟ್‌ಗಳನ್ನು ಹೊಂದಿದೆ. ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಅತ್ಯಾಧುನಿಕ ಕ್ರೀಡಾ ವಿಜ್ಞಾನ ಕೇಂದ್ರವನ್ನು ಸ್ಥಾಪಿಸಲಾಗಿದೆ. ಕ್ರೀಡಾ ಚಟುವಟಿಕೆಗಳನ್ನು ಉತ್ತೇಜಿಸಲು ಪ್ರಸ್ತುತ ಸಮಾರಂಭದಲ್ಲಿ ಟೋಕಿಯೋ 2020ರಲ್ಲಿ ಭಾಗವಹಿಸಿದ ರಾಜ್ಯದ ಮೂವರು ಪ್ರತಿಭಾವಂತ ಆಟಗಾರರನ್ನು ಪ್ರೋತ್ಸಾಹಕವಾಗಿ ರಾಜ್ಯಪಾಲರ ವಿವೇಚನಾ ನಿಧಿಯಿಂದ ಒಂದು ಲಕ್ಷ ರೂಪಾಯಿ ಮತ್ತು ಸಹಾಯಕ ತರಬೇತುದಾರರಿಗೆ ಒಂದು ಲಕ್ಷ ರೂಪಾಯಿಗಳನ್ನು ನೀಡಿ ಗೌರವಿಸಲಾಯಿತು.

ರಾಜ್ಯದಲ್ಲಿ ಕ್ರೀಡೆಗೆ ಹೆಚ್ಚಿನ ಆದ್ಯತೆ ನೀಡುವ ಮೂಲಕ ಕ್ರೀಡಾಪಟುಗಳಿಗೆ ಉತ್ತೇನ ನೀಡಬೇಕು. ಅಂತರಾಷ್ಟ್ರೀಯ ಮಟ್ಟದಲ್ಲಿ ಕರ್ನಾಟಕದ ಕ್ರೀಡಾಪಟುಗಳು ಹೆಚ್ಚಾಗಿ ಗುರುತಿಸಿಕೊಳ್ಳಬೇಕು. ಬಾಲ ಕ್ರೀಡಾ ಪ್ರತಿಭೆಗಳನ್ನು ಗುರುತಿಸಿ ಉತ್ತೇಜಿಸಬೇಕು. ಈ ನಿಟ್ಟಿನಲ್ಲಿ ಸರ್ಕಾರಕ್ಕೆ ಸಂಪೂರ್ಣ ಸಹಕಾರ ನೀಡಲಾಗುವುದು ಹಾಗೂ ಇದು ಪ್ರತಿಯೊಬ್ಬ ನಾಗರೀಕನು ಈ ಕಾರ್ಯಕ್ಕೆ ಕೈ ಜೋಡಿಸಬೇಕು ಎಂದು ಕರೆ ನೀಡಿದರು.

ಮುಖ್ಯಮಂತ್ರಿ ಬಸವರಾಜ ಎಸ್. ಬೊಮ್ಮಾಯಿ ಮಾತನಾಡಿ, ಟೋಕಿಯೋ ಒಲಂಪಿಕ್ಸ್‌ನಲ್ಲಿ ಭಾರತದ ಮತ್ತು ಕರ್ನಾಟಕದ ಕ್ರೀಡಾ ಪಟುಗಳ ಸಾಧನೆ ಗಮನಾರ್ಹವಾಗಿದೆ. ಮುಂಬರುವ ದಿನಗಳಲ್ಲಿ ರಾಜ್ಯವು ಕ್ರೀಡಾ ಕ್ಷೇತ್ರಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡುವ ಸಲುವಾಗಿ, ಅಮೃತ್ ಕ್ರೀಡಾ ದತ್ತು ಯೋಜನೆಯನ್ನು ರೂಪಿಸಿದ್ದು, 2024ರಲ್ಲಿ ಪ್ಯಾರೀಸ್‌ನಲ್ಲಿ ನಡೆಯುವ ಒಲಂಪಿಕ್ಸ್‌ನಲ್ಲಿ ಭಾಗವಹಿಸುವ 75 ಕ್ರೀಡಾಪಟುಗಳಿಗೆ ಅಗತ್ಯ ತರಬೇತಿ ಹಾಗೂ ಪ್ರೋತ್ಸಾಹ ನೀಡಲು ತಲಾ 5 ಲಕ್ಷ ರೂ.ಗಳ ಅನುದಾನ ನೀಡಿ, ಅವರಲ್ಲಿ ಶಕ್ತಿ ತುಂಬಲಾಗುವುದು ಎಂದರು.

ಪ್ರತಿ ಜಿಲ್ಲಾ ಮಟ್ಟದಲ್ಲಿ ಆಧುನಿಕ ಕ್ರೀಡಾಂಗಣಗಳನ್ನು ನಿರ್ಮಾಣ ಮಾಡಲು ಕ್ರಮವಹಿಸುವುದರ ಜೊತೆಗೆ ಈಗಿರುವ ಕ್ರೀಡಾಂಗಣಗಳನ್ನು ಉನ್ನತೀಕರಿಸುವ ಉನ್ನತೀಕರಿಸಲಾಗುವುದು. ಮುಂದಿನ ಆಯವ್ಯಯದಲ್ಲಿ ಕ್ರೀಡಾ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದ ಮುಖ್ಯಮಂತ್ರಿಗಳು, ರಾಷ್ಟ್ರೀಯ, ಅಂತರ್‌ರಾಷ್ಟ್ರೀಯ ಮಟ್ಟದಲ್ಲಿ ನಡೆಯುವ ಕ್ರೀಡೆಗಳಲ್ಲಿ ಭಾಗವಹಿಸಲು ಕ್ರೀಡಾಪಟುಗಳನ್ನು ತಯಾರು ಮಾಡಲು ಉತ್ತಮ ತರಬೇತುದಾರರ ಅವಶ್ಯಕತೆ ಇದ್ದು, ಇದಕ್ಕೆ ಹೆಚ್ಚಿನ ಒತ್ತು ನೀಡಲಾಗುವುದು ಎಂದು ತಿಳಿಸಿದರು.

ಕ್ರೀಡಾಪಟುಗಳಿಗೆ ರಾಜಭವನದಿಂದ ಪ್ರೋತ್ಸಾಹ ಸಿಗುತ್ತಿರುವುದು ಇದೇ ಮೊದಲ ಬಾರಿಯಾಗಿದ್ದು, ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಹೊಸ ಪರಂಪರೆ ಪ್ರಾರಂಭಿಸಿರುವುದರಿಂದ, ಕ್ರೀಡಾಪಟುಗಳಿಗೆ ಇದು ದೊಡ್ಡ ಪ್ರೇರಣೆಯಾಗಲಿದೆ ಎಂದು ರಾಜ್ಯಪಾಲರನ್ನು ಅಭಿನಂದಿಸಿದರು.

ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ರೇಷ್ಮೆ ಇಲಾಖೆ ಸಚಿವ ಡಾ: ಕೆ.ಸಿ. ನಾರಾಯಣಗೌಡ ಮಾತನಾಡಿ, ರಾಷ್ಟ್ರೀಯ ಮತ್ತು ಅಂತರ್‌ರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸುವ ರಾಜ್ಯದ ಕ್ರೀಡಾಪಟುಗಳಿಗೆ ಪೊಲೀಸ್ ಇಲಾಖೆಯಲ್ಲಿ ಶೇ.2 ರಷ್ಟು ಹುದ್ದೆಗಳನ್ನು ನೀಡಲು ತೀರ್ಮಾನಿಸಲಾಗಿದ್ದು, ಇತರೆ ಇಲಾಖೆಯಲ್ಲಿಯೂ ಸಹ ಶೇ. 2ರಷ್ಟು ಹುದ್ದೆಗಳನ್ನು ಮೀಸಲಿಡಲು ಮುಖ್ಯಮಂತ್ರಿಗಳಿಗೆ ಈಗಾಗಲೇ ಮನವಿ ಸಲ್ಲಿಸಲಾಗಿದೆ, ಮನವಿಗೆ ಸಕರಾತ್ಮಕವಾಗಿ ಮಾನ್ಯ ಮುಖ್ಯಮಂತ್ರಿಗಳು ಸ್ಪಂದಿಸಿದ್ದು, ತೀರ್ಮಾನದ ಹಂತದಲ್ಲಿದೆ ಎಂದರು.

ಗ್ರಾಮೀಣ ಕ್ರೀಡಾಪಟುಗಳನ್ನು ಗುರುತಿಸಲು 750 ಹಳ್ಳಿಗಳಲ್ಲಿ ಎನ್‌ಎಸ್‌ಎಸ್ ಮೂಲಕ ಕಾರ್ಯಕ್ರಮಗಳನ್ನು ಏರ್ಪಡಿಸಲಾಗುವುದು. ಇನ್ನು ಮುಂದೆ ಶಾಲಾ–ಕಾಲೇಜುಗಳಲ್ಲಿ ಶಿಕ್ಷಣದ ಜೊತೆ ಜೊತೆಗೆ ಒಂದು ಗಂಟೆಗಳ ಕಾಲ ಕ್ರೀಡೆಗಳನ್ನು ನಡೆಸಲು ಅಗತ್ಯ ಕ್ರಮ ವಹಿಸುವಂತೆ ತಿಳಿಸಲಾಗುವುದು.

ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಕ್ರೀಡೆಗೆ ಹೆಚ್ಚಿನ ಪ್ರೊತ್ಸಾಹ ನೀಡಿದ್ದು, ನಮ್ಮ ಮುಖ್ಯಮಂತ್ರಿಗಳು ಸಹ ಕ್ರೀಡಾ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಿದ್ದಾರೆ ಎಂದ ಸಚಿವರು, ಭಾರತಕ್ಕೆ 7 ಪದಕಗಳನ್ನು ತಂದು ಕೊಟ್ಟ ಎಲ್ಲಾ ಕ್ರೀಡಾಪಟುಗಳಿಗೆ ಅಭಿನಂದನೆ ಸಲ್ಲಿಸಿದರು.

ಸನ್ಮಾನ ಹಾಗೂ ಪ್ರೋತ್ಸಾಹ ಧನ ಸ್ವೀಕರಿಸಿದ ಈಜು ಪಟು ಶ್ರೀಹರಿ ನಟರಾಜನ್ ಮಾತನಾಡಿ, ರಾಜ್ಯದ ಕ್ರೀಡಾಪಟುವಾಗಿ ಒಲಂಪಿಕ್ಸ್‌ನಲ್ಲಿ ಭಾಗವಹಿಸಿದ್ದು ಅವಿಸ್ಮರಣೀಯವಾಗಿದೆ, ಪ್ರೋತ್ಸಾಹ ನೀಡಿ ಸ್ಪೂರ್ತಿ ತುಂಬಿದ ಎಲ್ಲರಿಗೂ ಧನ್ಯವಾದಗಳನ್ನು ಸಲ್ಲಿಸಿದರು. ಹಾಕಿ ತಂಡದ ತರಬೇತುದಾರರಾದ ಶ್ರೀಮತಿ ಬಿ.ಎಸ್. ಅಂಕಿತ ಮಾತನಾಡಿ, ಕ್ರೀಡೆಯಲ್ಲಿ ಭಾಗವಹಿಸಲು ಪೋಷಕರು ಹೆಣ್ಣು ಮಕ್ಕಳಿಗೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು. ನನಗೆ ನನ್ನ ತಂದೆ, ತಾಯಿ, ಅತ್ತೆ, ಮಾವ ಹಾಗೂ ಪತಿ ನೀಡಿರುವ ಪ್ರೋತ್ಸಾಹದಿಂದ ಕ್ರೀಡೆಯಲ್ಲಿ ಉನ್ನತಿ ಸಾಧಿಸಲು ಅವಕಾಶ ಸಿಕ್ಕಿದೆ ಎಂದರು.

ಯುವ ಸಬಲೀಕರಣ ಮತ್ತು ಕ್ರೀಡೆ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳಾದ ಶ್ರೀಮತಿ ಡಾ: ಶಾಲಿನಿ ರಜನೀಶ್ ಅವರು ಸ್ವಾಗತಿಸಿದರು.

ಕಾರ್ಯಕ್ರಮದಲ್ಲಿ ಶಾಸಕರು ಹಾಗೂ ಕರ್ನಾಟಕ ಒಲಂಪಿಕ್ ಸಂಸ್ಥೆಯ ಅಧ್ಯಕ್ಷರಾದ ಡಾ: ಕೆ. ಗೋವಿಂದರಾಜು, ಉಪಾಧ್ಯಕ್ಷರಾದ ಪುರುಷೋತ್ತಮ್ ಹಾಗೂ ಕ್ರೀಡಾಪಟುಗಳ ಕುಟುಂಬದವರು ಭಾಗವಹಿಸಿದ್ದರು.

## ಕಳೆದ ಬಾರಿಗಿಂತ ವಿಶೇಷವಾಗಿ ಮೈಸೂರು ದಸರಾ ಆಚರಣೆ – ಮುಖ್ಯಮಂತ್ರಿ ಬಸವರಾಜ ಎಸ್ ಬೊಮ್ಮಾಯಿ

ಬೆಂಗಳೂರು, ಸೆಪ್ಟೆಂಬರ್ ೦3, (ಕರ್ನಾಟಕ ವಾರ್ತೆ) :

ಮೈಸೂರು ದಸರಾ ಕೇವಲ ಕರ್ನಾಟಕಕ್ಕೆ ಸೀಮಿತವಾಗಿಲ್ಲ, ಇದೊಂದು ಜಗತ್ ಪ್ರಸಿದ್ಧ ಆಚರಣೆಯಾಗಿದ್ದು, ಪ್ರತಿ ವರ್ಷ ಅತ್ಯಂತ ಸಡಗರ ಸಂಭ್ರಮದಿಂದ ಆಚರಿಸುತ್ತಾ ಬರುತ್ತಿದ್ದು, ಕೋವಿಡ್ ಹಿನ್ನಲೆಯಲ್ಲಿ ಈ ಬಾರಿ ಕಳೆದ ಬಾರಿಗಿಂತ ವಿಶೇಷವಾಗಿ ಸರಳ ಹಾಗೂ ಸಾಂಪ್ರದಾಯಿಕವಾಗಿ ಮೈಸೂರು ದಸರಾವನ್ನು ಆಚರಿಸಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಎಸ್ ಬೊಮ್ಮಾಯಿ ಅವರು ಹೇಳಿದರು.

ಇಂದು ವಿಧಾನಸೌಧದಲ್ಲಿ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ "ನಾಡ ಹಬ್ಬ ಮೈಸೂರು ದಸರಾ -2021"ರ ಆಚರಣೆ ಕುರಿತಂತೆ ಸಭೆಯನ್ನು ಹಮ್ಮಿಕೊಳ್ಳಲಾಗಿತ್ತು. ಈ ಸಭೆಯಲ್ಲಿ ಮಾತನಾಡಿದ ಮುಖ್ಯಮಂತ್ರಿಗಳು, ರೈತರು ದುಡಿಮೆಯ ನಂತರ ಆಚರಿಸುವ ದಸರಾ ಹಬ್ಬ ಅತ್ಯಂತ ಖುಷಿಯ ಹಾಗೂ ಮಹತ್ವದ ನಾಡಹಬ್ಬವಾಗಿದೆ.

ಕೋವಿಡ್ ಹಿನ್ನಲೆಯಲ್ಲಿ ಜನರು ಹಾಗೂ ಸರ್ಕಾರಗಳು ಸಹ ಆರ್ಥಿಕ ಸಮಸ್ಯೆಯಲ್ಲಿ ಸಿಲುಕಿವೆ, ಇಂತಹ ಸಮಯದಲ್ಲಿ ಸಹ ಹಬ್ಬವನ್ನು ಆಚರಿಸಲು ಉದ್ದೇಶಿಸಲಾಗಿದ್ದು, ಜವಾಬ್ಧಾರಿಯೊಂದಿಗೆ ಪಾರಂಪರಿಕಾ ದಸರಾ ಆಚರಣೆಯನ್ನು ಸರಳವಾಗಿ ಆಚರಣೆ ಮಾಡಲಾಗುವುದು. ಅದರಲ್ಲಿ ಮುಖ್ಯವಾಗಿ ಚಾಮುಂಡಿ ಬೆಟ್ಟ ಹಾಗೂ ಅರಮನೆ ಆವರಣದಲ್ಲಿ ಅರ್ಥಪೂರ್ಣವಾಗಿ ಆಚರಿಸಬೇಕಾಗಿದೆ ಎಂದು ತಿಳಿಸಿದರು.

ಈಗಾಗಲೇ ಕೋವಿಡ್ ಮೂರನೆ ಅಲೆಯ ಬಗ್ಗೆ ತಜ್ಞರು ವರದಿಗಳನ್ನು ಸಲ್ಲಿಸಿದ್ದು, ಈ ಬಗ್ಗೆ ಎಚ್ಚರಿಕೆ ವಹಿಸಲಾಗುವುದು. ತಜ್ಞರು ಕೋವಿಡ್ 3ನೇ ಅಕ್ಟೋಬರ್ ಕೊನೆಗೆ ಬರುತ್ತದೆ ಎಂದು ತಿಳಿಸಿದ್ದಾರೆ. ಸೆಪ್ಟೆಂಬರ್ 20ರ ನಂತರ ಕೋವಿಡ್ ಸ್ಥಿತಿಗತಿ ನೋಡಿಕೊಂಡು ದಸರಾವನ್ನು ಮತ್ತಷ್ಟು ಅರ್ಥಪೂರ್ಣವಾಗಿ ಆಚರಿಸುವ ಬಗ್ಗೆ ತೀರ್ಮಾನ ತೆಗೆದುಕೊಳ್ಳೋಣ. ತಜ್ಞರು ನೀಡಿರುವ ಸಲಹೆ ಸೂಚನೆಗಳನ್ನು ಪಾಲಿಸುವುದರೊಂದಿಗೆ ಕಳೆದ ಬಾರಿಯಂತೆ ಈ ವರ್ಷವೂ ಮೈಸೂರು ದಸರಾವನ್ನು ಆಚರಿಸಲಾಗುವುದು ಎಂದು ತಿಳಿಸಿದರು.

ಈ ಬಾರಿಯ ದಸರಾ ಆಚರಣೆಗಾಗಿ 6 ಕೋಟಿ ಬಿಡುಗಡೆ ಮಾಡಲಾಗುವುದು, ದೀಪಾಂಲಕಾರವನ್ನು ಪ್ರತ್ಯೇಕವಾಗಿ ಮಾಡಲಾಗುವುದು. ಮೈಸೂರಿನ ರಸ್ತೆಗಳ ದುರಸ್ತಿಗಾಗಿ ಪ್ರತ್ಯೇಕ ಬೇಡಿಕೆಯನ್ನು ಇಲಾಖಾ ಮೂಲಕ ಸಲ್ಲಿಸಲು ಸೂಚಿಸಿದರು.

ಪ್ರವಾಸೋದ್ಯಮ ಅಭಿವೃದ್ಧಿಗಾಗಿ ರಾಜ್ಯವನ್ನು ಗಮನದಲ್ಲಿಟ್ಟುಕೊಂಡು ಟೂರಿಸಂ ಸರ್ಕೀಟ್ ರೂಪಿಸುವ ಕುರಿತು ಶೀಘ್ರದಲ್ಲಿ ಪ್ರತ್ಯೇಕ ಸಭೆಯನ್ನು ಹಮ್ಮಿಕೊಳ್ಳೋಣ, ಕೋವಿಡ್ ಹಿನ್ನಲೆಯಲ್ಲಿ ಕುಸಿದಿರುವ ಪ್ರವಾಸೋದ್ಯಮವ ಚೇತರಿಸಿಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಇದರಲ್ಲಿ ಮೈಸೂರು ಪ್ರವಾಸೋದ್ಯಮ ಕ್ಕೆ ಹೆಚ್ಚಿನ ಪ್ರಾಶಸ್ತ್ಯ ನೀಡಲಾಗುವುದು ಎಂದು ಮುಖ್ಯಮಂತ್ರಿಗಳು ಸಭೆಯಲ್ಲಿ ಭರವಸೆ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಸುನಿಲ್ ಕುಮಾರ್ ಅವರು ಮಾತನಾಡಿ ಮುಖ್ಯಮಂತ್ರಿಗಳ ನಿರ್ದೇಶನದಂತೆ ಸರಳ ದಸರಾವನ್ನು ಆಚರಿಸಲು ನಿರ್ಧರಿಸಿದ್ದು, ಸರಳ ದಸರಾವನ್ನು ನಮ್ಮ ಇತಿಮಿತಿಯೊಳಗೆ ಆಚರಿಸಲು ಅಗತ್ಯವಿರುವ ಕ್ರಮಕೈಗೊಳ್ಳಲಾಗುವುದು, ದಸರಾ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ರಾಜ್ಯದ ಕಲಾವಿದರಿಗೆ ಅವಕಾಶ ನೀಡಲಾಗುವುದು ಎಂದು ಹೇಳಿದರು.

ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್ ಅವರು ಮಾತನಾಡಿ ಈ ಹಿಂದಿನ ದಸರಾ ಕಾರ್ಯಕ್ರಮಗಳ ಪೆಂಡಿಂಗ್ ಬಿಲ್ಲುಗಳಿಗೆ ಹಣ ಬಿಡುಗಡೆ ಮಾಡಿ ಸಮಸ್ಯೆ ಬಗೆಹರಿಸಿರುವ ಮುಖ್ಯಮಂತ್ರಿಗಳಿಗೆ ಧನ್ಯವಾದಗಳನ್ನು ತಿಳಿಸಿದ ಸಚಿವರು ಯಾವುದೇ ಕಾರಣಕ್ಕೂ ದಸರಾ ಆಚರಣೆಯನ್ನು ನಿಲ್ಲಿಸಲು ಸಾಧ್ಯವಿಲ್ಲ, ಕಳೆದ ಭಾರಿಯಂತೆ ಸರಳ ಸಾಂಸ್ಕೃತಿಕ ದಸರಾವನ್ನು ಆಚರಿಸಲಾಗುವುದು, ಕೋವಿಡ್ ಹಿನ್ನಲೆಯಲ್ಲಿ ಸಾಕಷ್ಟು ಮುನ್ನೆಚ್ಚರಿಕೆ ಕ್ರಮಗಳ ಮೂಲಕ ಆಚರಿಸಬೇಕಾಗಿದೆ. ಯಾವುದೇ ಕಾರಣಕ್ಕೂ ಗುಂಪು ಸೇರುವುದಕ್ಕೆ ಆಸ್ಪದ ನೀಡಬಾರದು, ದೀಪಂಲಕಾರ ಅತ್ಯಂತ ಮುಖ್ಯ ಆಕರ್ಷಣೆಯಾಗಿದ್ದು ಅದೊಂದು ದಸರೆಯ ಕಳೆ, ಯುವ ದಸರಾ ಸೇರಿದಂತೆ ಇತರೆ ಕಾರ್ಯಕ್ರಮಗಳ ಈ ಸಂದರ್ಭದಲ್ಲಿ ಬೇಡ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಪ್ರವಾಸೋದ್ಯಮ ಸಚಿವ ಆನಂದ ಸಿಂಗ್ ಅವರು ಮಾತನಾಡಿ ಜಗತ್ ಪ್ರಸಿದ್ಧ ಮೈಸೂರು ದಸರಾ ಎಲ್ಲಿಂದ ಆರಂಭವಾಯ್ತು ಎನ್ನುವ ಮೂಲವನ್ನು ಮರೆಯುತ್ತಿದ್ದೇವೆ, ವಿಜಯನಗರದ ಸಾಮ್ರಾಜ್ಯ ಹಂಪಿಯಲ್ಲಿ ಆರಂಭವಾದ ದಸರಾ ಕಾಲನಂತರದಲ್ಲಿ ಮೈಸೂರಿಗೆ ಶಿಫ್ಟ್ ಆಯ್ತು, ಹಾಗಾಗಿ ಹಂಪಿ ಉತ್ಸವಕ್ಕೆ ಸಹ ಇದೇ ರೀತಿ ಮೈಸೂರಿನ ದಸರಾ ರೀತಿ ಪ್ರಾಮುಖ್ಯತೆ ನೀಡಿ ಎಂದು ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಿದರು.

ಸಭೆಯಲ್ಲಿ ಸಚಿವರುಗಳಾದ ಬೈರತಿ ಬಸವರಾಜ, ಸಂಸದರುಗಳಾದ ಶ್ರೀಮತಿ ಸುಮಲತಾ ಅಂಬರೀಶ್, ಪ್ರತಾಪ್ ಸಿಂಹ ಸೇರಿದಂತೆ ಮೈಸೂರು, ಮಂಡ್ಯ ಮತ್ತು ಚಾಮರಾಜನಗರ ಜಿಲ್ಲೆಗಳ ಅನೇಕ ಶಾಸಕರುಗಳು ಮತ್ತು ಮುಖ್ಯ ಕಾರ್ಯದರ್ಶಿಗಳಾದ ಪಿ.ರವಿಕುಮಾರ್ ಮೂರು ಜಿಲ್ಲೆಗಳ ಜಿಲ್ಲಾಧಿಕಾರಿಗಳು ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

**ರಸ್ತೆ ಸಾರಿಗೆ ನಿಗಮಗಳನ್ನು ಲಾಭದಾಯಕವಾಗಿಸಲು ಕ್ರಮ**

**- ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ**

ಬೆಂಗಳೂರು, ಸೆಪ್ಟೆಂಬರ್ 03 (ಕರ್ನಾಟಕ ವಾರ್ತೆ):

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವನ್ನು ಲಾಭದಾಯಕವಾಗಿಸಲು ಕೈಗೊಳ್ಳಬೇಕಾದ ಸುಧಾರಣಾ ಕ್ರಮಗಳ ಬಗ್ಗೆ ಅಧ್ಯಯನ ನಡೆಸಿ ವರದಿ ನೀಡುವ ಸಲುವಾಗಿ ಮುಂದಿನ ದಿನಗಳಲ್ಲಿ ತಜ್ಞರನ್ನೊಳಗೊಂಡ ಪರಿಣತರ ಸಮಿತಿಯನ್ನು ರಚಿಸಲಾಗುವುದು ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಇಂದು ತಿಳಿಸಿದರು.

ಅವರು ಇಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ 60 ವರ್ಷದ ಸಂಭ್ರಮ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತ್ತಿದ್ದರು.

ಇಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಸಂಕಷ್ಟದಲ್ಲಿದೆ. ಆದರೆ ಸಮಸ್ಯೆಯನ್ನು ಬೆಳೆಯಲು ಬಿಡದೆ ಅಗತ್ಯ ಪರಿಹಾರಗಳನ್ನು ಕಂಡುಕೊಂಡು ಆದಾಯದ ಕಡೆಗೆ ತರುವ ಜವಬ್ದಾರಿ ಸಂಸ್ಥೆಯ ಎಲ್ಲಾ ಸಿಬ್ಬಂದಿಗಳ ಕರ್ತವ್ಯ. ನಿಗಮದಲ್ಲಿ ಆದಾಯೋತ್ಪನ್ನ ಮಾದರಿಯಿದ್ದರೂ, ನಷ್ಟದಲ್ಲಿರಲು ಕಾರಣಗಳನ್ನು ವಿಶ್ಲೇಷಿಸುವುದರೊಂದಿಗೆ, ನಿಗಮವನ್ನು ಲಾಭದಾಯಕವಾಗಿಸಲು ಸಲಹೆ ಸೂಚನೆಗಳನ್ನು ನೀಡಲು ಈ ಸಮಿತಿ ರಚಿಸಲಾಗುವುದು. ಕೆ.ಎಸ್.ಆರ್.ಟಿ.ಸಿ. ಗೆ ತನ್ನದೇ ಅಂತರ್ಗತವಾದ ಶಕ್ತಿ ಸಾಮರ್ಥ್ಯ ಇದೆ. ಇವುಗಳನ್ನು ವೃದ್ಧಿಸುವುದು ಹೇಗೆ ಎಂಬ ಕುರಿತು ಸಹ ಚಿಂತನೆ ನಡೆಸಲಾಗುವುದು ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಕೋವಿಡ್ 19ರ ಸಂಕಷ್ಟದ ಅವಧಿಯಲ್ಲಿ ನೌಕರರ ವೇತನ ಸೇರಿದಂತೆ, ನಿಗಮಕ್ಕೆ ಬೆಂಬಲ ನೀಡಲು ರಾಜ್ಯ ಸರ್ಕಾರ 2300 ಕೋಟಿ ರೂ. ಬಿಡುಗಡೆ ಮಾಡಿದೆ. ತಾವು ಮುಖ್ಯಮಂತ್ರಿಯಾದ ನಂತರವೂ 108 ಕೋಟಿ ರೂ. ಬಿಡುಗಡೆ ಮಾಡಲಾಗಿದೆ ಎಂದು ಅವರು ತಿಳಿಸಿದರು.

ಮುಂದಿನ ದಿನಗಳಲ್ಲಿ ನಿಗಮದ ಆದಾಯ ಹೆಚ್ಚಿಸಲು ಕ್ರಮ ಕೈಗೊಳ್ಳಬೇಕಾಗಿದೆ. ಇದಕ್ಕೆ ಚಿಂತನೆ, ಕಾರ್ಯವಿಧಾನಗಳಲ್ಲಿ ಬದಲಾವಣೆ ಅಗತ್ಯ; ಜೊತೆಗೆ ಕ್ಷಮತೆಯಿಂದ ನಿಗಮವನ್ನು ಮುನ್ನಡೆಸಲು ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದರು.

ನಿಗಮದ ಸುಧಾರಣೆಯೊಂದಿಗೆ ನೌಕರರ ಜೀವನಮಟ್ಟ ಸುಧಾರಣೆಗೂ ಆದ್ಯತೆ ನೀಡಲಾಗುವುದು ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಕೆ.ಎಸ್.ಆರ್.ಟಿ.ಸಿ.ಯೊಂದಿಗೆ ಜನತೆ ಭಾವನಾತ್ಮಕ ಬಾಂಧವ್ಯ ಬೆಸೆದಿದ್ದಾರೆ. ಬಸ್ ಎಂದರೆ ಹಲವು ಅರ್ಥಗಳನ್ನು ಧ್ವನಿಸುತ್ತದೆ- ಪ್ರಯಾಣ, ಜೀವನದ ಪ್ರಯಾಣ, ಎಲ್ಲರಿಗೂ ಸ್ಥಳಾವಕಾಶ ಒದಗಿಸುವ ಸಮಾನತೆಯ ಪರಿಕಲ್ಪನೆ, ನಿರಂತರ ಚಾಲನಾ ಶಕ್ತಿ ಮೊದಲಾದ ವಿಚಾರಗಳು ನಮ್ಮಲ್ಲಿ ಸುಳಿಯುತ್ತದೆ. ಸರ್ಕಾರದಲ್ಲಿ ನಿರಂತರ ಚಲನಶೀಲತೆ ಹೊಂದಿರುವ ಇಲಾಖೆ ಸಾರಿಗೆ ಇಲಾಖೆ ಎಂದು ಮುಖ್ಯಮಂತ್ರಿಗಳು ಬಣ್ಣಿಸಿದರು.

ಬಸ್ ಚಾಲಕರು ಅತ್ಯಂತ ಜವಾಬ್ದಾರಿಯ ಕೆಲಸ ನಿರ್ವಹಿಸುತ್ತಾರೆ. ಪ್ರಯಾಣದ ಅವಧಿಯಲ್ಲಿ ನಮ್ಮ ಜೀವ ಅವರ ಕೈಯಲಿರುತ್ತದೆ. ಆದ್ದರಿಂದ ಚಾಲಕರಿಗೆ ಮೊದಲ ಗೌರವ ಸಲ್ಲಿಸುವುದಾಗಿ ಮುಖ್ಯಮಂತ್ರಿಗಳು ತಿಳಿಸಿದರು.

ವಿಶ್ವದಾದ್ಯಂತ ಸಾರಿಗೆ ವ್ಯವಸ್ಥೆಯಲ್ಲಿ ಎಷ್ಟೇ ಬದಲಾವಣೆಗಳಾದರೂ, ಬಸ್ ಸೇವೆ ನಿರಂತರವಾಗಿ ತನ್ನ ಅಸ್ತಿತ್ವ ಉಳಿಸಿಕೊಂಡಿದೆ. ಹಳ್ಳಿಗಳಲ್ಲಿ ಬಸ್ ಬಂದರೆ ಚಟುವಟಿಕೆ ಪ್ರಾರಂಭವಾಗುತ್ತದೆ. ಈ ಎಲ್ಲ ಕಾರಣಗಳಿಗಾಗಿ ನಿಗಮ ತನ್ನದೇ ಆದ ಗೌರವವನ್ನು ಹೊಂದಿದೆ ಎಂದು ಅವರು ಅಭಿಪ್ರಾಯಪಟ್ಟರು.

ಬದಲಾಗುತ್ತಿರುವ ತಂತ್ರಜ್ಞಾನದೊಂದಿಗೆ ಹೊಂದಿಕೊಳ್ಳುವ ಜೊತೆಗೆ ಪರಿಸರ ಸ್ನೇಹಿ ವಾಹನಗಳನ್ನು ಪರಿಚಯಿಸುವ ನಿಟ್ಟಿನಲ್ಲಿ ಬಿಎಂಟಿಸಿಯು 90 ವಿದ್ಯುತ್ ಚಾಲಿತ ಬಸ್ ಗಳನ್ನು ಖರೀದಿಸುತ್ತಿದೆ. ಅಂತೆಯೇ ಕೆ.ಎಸ್.ಆರ್.ಟಿ.ಸಿಯು 642 ಹೊಸ ಬಸ್ ಗಳನ್ನು ಖರೀದಿಸುತ್ತಿದೆ ಎಂದು ವಿವರಿಸಿದರು. ಕೆ.ಎಸ್. ಆರ್. ಟಿ.ಸಿ. ಕಾರ್ಯಾಗಾರಗಳಲ್ಲಿ ಬಳಕೆಯಾಗುತ್ತಿರುವ ತಂತ್ರಜ್ಞಾನಗಳ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದ ಮುಖ್ಯಮಂತ್ರಿಗಳು, ಈ ತಂತ್ರಜ್ಞಾನಗಳು ಪೂರ್ಣಪ್ರಮಾಣದಲ್ಲಿ ಬಳಕೆಯಾಗಬೇಕು ಎಂದು ಸಲಹೆ ನೀಡಿದರು.

ಸಮಾರಂಭದಲ್ಲಿ ನಾಲ್ಕೂ ನಿಗಮಗಳ ಅಪಘಾತ ರಹಿತ ಚಾಲನೆ ಮಾಡಿದ 60 ಚಾಲಕರಿಗೆ ಚಿನ್ನದ ಪದಕ ಪ್ರದಾನ ಮಾಡಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ 60ನೇ ವರ್ಷದ ಸವಿ ನೆನಪಿಗೆ ಅಂಚೆ ಲಕೋಟೆ ಬಿಡುಗಡೆ ಹಾಗೂ ಕೆಂಪೇಗೌಡ ಬಸ್ ನಿಲ್ದಾಣ 60 ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ಸ್ಮರಣ ಸಂಚಿಕೆ ಬಿಡುಗಡೆ ಮಾಡಲಾಯಿತು.

ಇದರೊಂದಿಗೆ ನೌಕರರು ಮತ್ತು ಕುಟುಂಬದವರ ಅನುಕೂಲಕ್ಕಾಗಿ ಇನ್ಫೋಸಿಸ್ ಸಹಯೋಗದೊಂದಿಗೆ ಡಿಜಿಟಲ್ ಲರ್ನಿಂಗ್ ಕಾರ್ಯಕ್ರಮ ಹಾಗೂ ಆನ್ ಲೈನ್ ನಲ್ಲಿ ನೌಕರರ ಕುಂದುಕೊರತೆ ನಿವಾರಣಾ ವ್ಯವಸ್ಥೆಗೆ ಚಾಲನೆ ನೀಡಲಾಯಿತು.

ಸಮಾರಂಭದಲ್ಲಿ ಸಚಿವರಾದ ಬಿ.ಶ್ರೀರಾಮುಲು, ಕೋಟ ಶ್ರೀನಿವಾಸ ಪೂಜಾರಿ, ಬಿ.ಸಿ. ನಾಗೇಶ್, ಆನಂದ್ ಸಿಂಗ್, ಕೆ.ಎಸ್.ಆರ್.ಟಿ.ಸಿ. ಅಧ್ಯಕ್ಷ ಎಂ.ಚಂದ್ರಪ್ಪ, ಶಾಸಕ ರಿಜ್ವಾನ್ ಅರ್ಷದ್, ಕರ್ನಾಟಕದ ಚೀಫ್ ಪೋಸ್ಟ್ ಮಾಸ್ಟರ್ ಜನರಲ್ ಶಾರದಾ ಸಂಪತ್, ಸಾರಿಗೆ ಇಲಾಖೆ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಟಾರಿಯಾ ಮತ್ತಿತರರು ಉಪಸ್ಥಿತರಿದ್ದರು.

## ಗುಣಮಟ್ಟವಲ್ಲದ ಔಷಧಿಗಳ ಬಳಕೆ ನಿಷೇಧ

ಬೆಂಗಳೂರು, ಸೆಪ್ಟೆಂಬರ್ 03 (ಕರ್ನಾಟಕ ವಾರ್ತೆ):

ಕರ್ನಾಟಕ ಔಷಧ ಪರೀಕ್ಷಾ ಪ್ರಯೋಗಾಲಯದ ಸರ್ಕಾರಿ ವಿಶ್ಲೇಷಕರು, ಪ್ಯಾಂಟೋಪ್ರಜೋಲ್ ಟ್ಯಾಬ್ಲೆಟ್ಸ್ ಐ.ಪಿ (ಪಂತರ್–40), ಪ್ಯಾಂಟೋಪ್ರಜೋಲ್ ಸೋಡಿಯಂ ಗ್ಯಾಸ್ಟ್ರೋ ರಿಸಿಸ್ಟೆಂಟ್ ಟ್ಯಾಬ್ಲೆಟ್ಸ್ ಐ.ಪಿ (ಮಯುಪನ್ ಟ್ಯಾಬ್ಲೆಟ್ಸ್), ಮೇಯುಟೆಲ್ – ಟ್ರಿಯೋ (ಟಲ್‌ಮಿಸರ್ಟನ್,ಅಮ್ಲೋಢಿಪೈನ್ & ಹೈಡ್ರೋಕ್ಲೋರೋಥೈಜಡ್ ಟ್ಯಾಬ್ಲೆಟ್ಸ್), ವಿಟಮಿನ್ 'ಸಿ' ಟ್ಯಾಬ್ಲೆಟ್ಸ್ ಐ.ಪಿ 500 ಎಂಜಿ, ಸಾಗರ್ ಬ್ಲಾಕ್ ಡಿಸ್‌ಇನ್‌ಫೆಕ್ಟೆಂಟ್ ಫಿನೈಲ್ (ಫಿನೈಲ್), ಸಾಗರ್ ಬ್ಲಾಕ್ ಡಿಸ್‌ಇನ್‌ಫೆಕ್ಟೆಂಟ್ ಫಿನೈಲ್ (ಫಿನೈಲ್), ವಿಟಮಿನ್ 'ಸಿ' ಟ್ಯಾಬ್ಲೆಟ್ಸ್ ಐ.ಪಿ 500 ಎಂಜಿ, ಗ್ಲಿಂಟ್ ಹ್ಯಾಂಡ್ ಕ್ಲೆನ್ಸರ್, ಗೋ ಫ್ರೀ ಹ್ಯಾಂಡ್ ಸ್ಯಾನಿಟೈಸರ್ (ಇಸೋಫ್ರೋಫೈಲ್ ಅಲ್ಕೋಹಾಲ್ ಎಮೋಲಿಯಂಟ್ & ಮಾಯಿಶ್ಚರೈಸರ್ ಹ್ಯಾಂಡ್ ರಬ್, ಆಮ್ಕ್ಲಾವೆನಿಕ್ ಡ್ರೈ ಸಿರಪ್ (ಅಮೋಕ್ಸಿಸಿಲಿನ್ & ಪೋಟ್ಯಾಷಿಯಂ ಕ್ಲಾವುಲನೇಟ್ ಓರಲ್ ಸಸ್ಪೆನ್‌ಶನ್ ಐಪಿ), ಟೊರ್‌ಟಾಪ್–40

(ಪ್ಯಾಂಟೋಪ್ರಜೋಲ್ ಗ್ಯಾಸ್ಟ್ರೋ-ರಿಲೀಸ್ ಕ್ಯಾಪ್ಸೂಲ್ಸ್ ಐಪಿ (ಪ್ಯಾಜ್‌ಗಸ್ ಡಿಎಸ್‌ಆರ್) ಈ ಔಷಧಿಗಳು / ಕಾಂತಿವರ್ಧಕ ಔಷಧ ವ್ಯಾಪಾರಿಗಳು, ಸಗಟು ಔಷಧ ಮಾರಾಟಗಾರರು, ವೈದ್ಯರು, ಆಸ್ಪತ್ರೆ ಮತ್ತು ನರ್ಸಿಂಗ್‌ಹೋಂನವರು ದಾಸ್ತಾನು ಮಾಡುವುದಾಗಲೀ ಅಥವಾ ಉಪಯೋಗಿಸುವುದಾಗಲೀ ಮಾಡಬಾರದು ಹಾಗೂ ಯಾರಾದರೂ ಔಷಧಿಗಳ ದಾಸ್ತಾನನ್ನು ಹೊಂದಿದ್ದಲ್ಲಿ ಕೂಡಲೇ ಸಂಬಂಧಪಟ್ಟ ಕೇತ್ರದ ಔಷಧ ನಿಯಂತ್ರಕರ ಗಮನಕ್ಕೆ ತರಬೇಕು ಎಂದು ಅಧಕೃತ ಪ್ರಕಟಣೆ ತಿಳಿಸಿದೆ.

## ಮೈಸೂರು ಮೃಗಾಲಯ ಮತ್ತು ಕಾರಂಜಿ ಪ್ರಕೃತಿ ಉದ್ಯಾನವನ ವೀಕ್ಷಣೆಗೆ ಅವಕಾಶ

ಬೆಂಗಳೂರು, ಸೆಪ್ಟೆಂಬರ್ 03 (ಕರ್ನಾಟಕ ವಾರ್ತೆ):

ಸರ್ಕಾರವು ಕೋವಿಡ್-19ರ ವೀಕ್ ಎಂಡ್ ಕರ್ಫ್ಯೂವನ್ನು ಮೈಸೂರು ಜಿಲ್ಲೆಯಲ್ಲಿ ತೆರವುಗೊಳಿಸಿರುವುದರಿಂದ ಸರ್ಕಾರದ ಕೋವಿಡ್-19ರ ಅನ್‌ಲಾಕ್ ಮಾರ್ಗಸೂಚಿಯನ್ನು ಅನುಸರಿಸಿ ಮೈಸೂರು ಮೃಗಾಲಯ ಮತ್ತು ಕಾರಂಜಿ ಪ್ರಕೃತಿ ಉದ್ಯಾನವನವನ್ನು ಸೆಪ್ಟೆಂಬರ್ 04 ರಿಂದ ಪ್ರತಿ ಶನಿವಾರ ಮತ್ತು ಭಾನುವಾರ ವೀಕ್ಷಕರ ವೀಕ್ಷಣೆಗೆ ತೆರೆಯಲಾಗುವುದು ಹಾಗೂ ಪ್ರತಿ ಮಂಗಳವಾರದಂದು ವೀಕ್ಷಣೆಗೆ ನಿರ್ಬಂಧಗೊಳಿಸಲಾಗುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

ಬೆಂಗಳೂರು, ಸೆಪ್ಟೆಂಬರ್ 03 (ಕರ್ನಾಟಕ ವಾರ್ತೆ):

ಮಾನ್ಯ ನಗರಾಭಿವೃದ್ಧಿ ಹಾಗೂ ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಎ. ಬಸವರಾಜ (ಭೈರತಿ) ಅವರು ಸೆಪ್ಟೆಂಬರ್ 4 ಮತ್ತು 5 ರಂದು ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳ ಪ್ರವಾಸ ಕೈಗೊಂಡು ಅಂದೇ ಕೇಂದ್ರಸ್ಥಾನಕ್ಕೆ ವಾಪಸ್ಸಾಗಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ

ಬೆಂಗಳೂರು, ಸೆಪ್ಟೆಂಬರ್ 03 (ಕರ್ನಾಟಕ ವಾರ್ತೆ):

**ದಿನಾಂಕ: 3.9.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 32 | ಉತ್ತಮ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 49 | ಉತ್ತಮ | Ozone |
| 3 | ಕವಿಕ, ಮೈಸೂರುರಸ್ತೆ | 62 | ತೃಪ್ತಿಕರ | * |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 31 | ಉತ್ತಮ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | * | * | * |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 64 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 50 | ಉತ್ತಮ | $PM_{10}$ |
| **(3.9.2021 at 11.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 47 | Good | $PM_{10}$ |
| 9 | ಪೀಣ್ಯ | * | * | * |

| | | | | |
|---|---|---|---|---|
| 10 | ಬಿಟಿಎಂ ಲೇಔಟ್ | * | * | * |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಶ್ವಾಸಕೋಶದ ಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತ ಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 3.9.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 32 | Good | $PM_{2.5}$ |
| 2 | Jayanagar 5th Block, Shalini ground | 49 | Good | CO |
| 3 | KAVIKA, Mysore Road | 62 | Satisfactory | $PM_{10}$ |
| 4 | Rajeev Gandhi Institute of Chest Disease, NIMHANS, Hombegowda Nagar | 31 | Good | $PM_{10}$ |
| 5 | HSR Layout, near Central Silkboard | * | * | * |
| 6 | City Railway Station, Magestic, Bengaluru | 64 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 50 | Good | $PM_{10}$ |
| **(3.9.2021 at 11.05 AM)** | | | | |

| | | | | |
|---|---|---|---|---|
| 8 | BWSSB, Kadabesanahalli | 47 | Good | $PM_{10}$ |
| 9 | Peenya | * | * | * |
| 10 | BTM Layout | * | * | * |

*Data not available

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |